## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಚಿಕ್ಕಮಗಳೂರು, ಚಿತ್ರದುರ್ಗ, ಹಾಸನ ಜಿಲ್ಲೆಯಲ್ಲಿ ಅನುಷ್ಠಾನಿಸಿರುವ ವೇದಾವತಿ ನದಿ ಪುನಶ್ಚೇತನ ಕಾಮಗಾರಿಯ ಸಮವರ್ತಿತ ಪರಿಣಾಮ ಅಧ್ಯಯನ (Concurrent Impact Assessment) ನಡೆಸಿ ವರದಿ ನೀಡುವ ಬಗ್ಗೆ ಟೆಂಡರ್ ಕರೆಯುವ ಪ್ರಾಧಿಕಾರ, ಟೆಂಡರ್ ಪರಿಶೀಲನಾ ಪ್ರಾಧಿಕಾರ ಮತ್ತು ಟೆಂಡರ್ ಅಂಗೀಕರಿಸುವ ಪ್ರಾಧಿಕಾರಿಗಳ ನೇಮಕಾತಿ ಮಾಡಿರುವ ಕುರಿತು.

~~~~~~

*ಪ್ರಸ್ತಾವನೆ:*

ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ವೇದಾವತಿ ನದಿ ಪುನಶ್ಚೇತನ ಹಂತ-2ರ ಕಾಮಗಾರಿಯನ್ನು ಚಿಕ್ಕಮಗಳೂರು ಜಿಲ್ಲೆಯ ಕಡೂರು/ತರಿಕೆರೆ/ಚಿಕ್ಕಮಗಳೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ/ಹೊಳಲ್‌ಕೆರೆ ತಾಲ್ಲೂಕು ಹಾಗೂ ಹಾಸನ ಜಿಲ್ಲೆಯ ಅರಸೀಕೆರೆ/ಬೇಲೂರು ತಾಲ್ಲೂಕಿನಲ್ಲಿ ಕಲ್ಲುಗುಂಡುಗಳ ತಡೆ, ಇಂಗುಬಾವಿ, ಇಂಜಕ್ಷನ್ ಬಾವಿ ಮತ್ತು ನೀರಿನ ಹೊಂಡ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಕಾಮಗಾರಿಗಳ ಅನುಷ್ಠಾನದ ಪ್ರಯೋಜನ ಹಾಗೂ ಸುಧಾರಣೆ ಬಗ್ಗೆ ತಿಳಿದುಕೊಳ್ಳಲು ಸಮವರ್ತಿತ ಪರಿಣಾಮ ಅಧ್ಯಯನ (Concurrent Impact Assessment) ನಡೆಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಪ್ರಕರಣ 09 ಮತ್ತು 10ರನ್ವಯ ಪ್ರಕ್ರಿಯೆ ಕೈಗೊಳ್ಳಲು ಟೆಂಡರ್ ಕರೆಯುವ ಪ್ರಾಧಿಕಾರ (Tender Inviting Authority), ಟೆಂಡರ್ ಪರಿಶೀಲನಾ ಪ್ರಾಧಿಕಾರ (Tender Scrutiny Authority) ಮತ್ತು ಟೆಂಡರ್ ಅಂಗೀಕರಿಸುವ ಪ್ರಾಧಿಕಾರ (Tender Accepting Authority) ನೇಮಕಾತಿ ಮಾಡಲು ತೀರ್ಮಾನಿಸಲಾಗಿದೆ.

ಆದುದರಿಂದ ಈ ಕೆಳಕಂಡ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: 419 ಉಖಾಯೋ 2016 ಬೆಂಗಳೂರು, ದಿನಾಂಕ: 17-08-2016

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ವೇದಾವತಿ ನದಿ ಪುನಶ್ಚೇತನ ಹಂತ-2ರ ಕಾಮಗಾರಿಯನ್ನು ಚಿಕ್ಕಮಗಳೂರು ಜಿಲ್ಲೆಯ ಕಡೂರು/ತರಿಕೆರೆ/ಚಿಕ್ಕಮಗಳೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ/ಹೊಳಲ್‌ಕೆರೆ ತಾಲ್ಲೂಕು ಹಾಗೂ ಹಾಸನ ಜಿಲ್ಲೆಯ ಅರಸೀಕೆರೆ/ಬೇಲೂರು ತಾಲ್ಲೂಕಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಕಾಮಗಾರಿಗಳ ಅನುಷ್ಠಾನದ ಪ್ರಯೋಜನದ ಬಗ್ಗೆ ತಿಳಿದುಕೊಳ್ಳಲು ಸಮವರ್ತಿತ ಪರಿಣಾಮ ಅಧ್ಯಯನ (Concurrent Impact Assessment) ನಡೆಸಬೇಕಾಗುತ್ತದೆ. ಸದರಿ ಅಧ್ಯಯನವನ್ನು ನಡೆಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಪ್ರಕರಣ 09 ಮತ್ತು 10ರನ್ವಯ ಪ್ರಕ್ರಿಯೆ ಕೈಗೊಳ್ಳಲು ಟೆಂಡರ್ ಕರೆಯುವ ಪ್ರಾಧಿಕಾರ (Tender Inviting Authority), ಟೆಂಡರ್ ಪರಿಶೀಲನಾ ಪ್ರಾಧಿಕಾರ (Tender Scrutiny Authority) ಮತ್ತು ಟೆಂಡರ್ ಅಂಗೀಕರಿಸುವ ಪ್ರಾಧಿಕಾರ (Tender Accepting Authority)ಗಳನ್ನು ಈ ಕೆಳಕಂಡಂತೆ ರಚಿಸಿ ಆದೇಶಿಸಿದೆ.

1. ಟೆಂಡರ್ ಕರೆಯುವ ಪ್ರಾಧಿಕಾರ (Tender Inviting Authority) :-ಜಂಟಿ ನಿರ್ದೇಶಕರು (ತಾಂತ್ರಿಕ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
2. ಟೆಂಡರ್ ಪರಿಶೀಲನಾ ಪ್ರಾಧಿಕಾರ (Tender Scrutiny Authority)

| ಕ್ರ ಸಂ | ಅಧಿಕಾರಿಯ ಪದನಾಮ | ಸ್ಥಾನಮಾನ |
|---|---|---|
| 1 | ವಿಶೇಷ ಆಯುಕ್ತರು ಎಮ್.ಜಿ.ಎನ್.ಆರ್.ಇ.ಜಿ.ಎ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಅಧ್ಯಕ್ಷರು |
| 2 | ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
~~~~~~

| | | |
|---|---|---|
| 3 | ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 4 | ಜಂಟಿ ನಿರ್ದೇಶಕರು (ಆಡಳಿತ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 5 | ಕರ್ನಾಟಕ ಗ್ರಾಮೀಣ ನೀರು ಸರಬರಾಜು ಇಲಾಖೆಯ ಪ್ರತಿ ನಿಧಿಗಳು | ಸದಸ್ಯರು |
| 6 | ಪ್ರತಿನಿಧಿಗಳು, ಅಂತರ್ ಜಲ ನಿರ್ದೇಶನಾಲಯ, ಕರ್ನಾಟಕ ಸರ್ಕಾರ | ಸದಸ್ಯರು |
| 7 | ಪ್ರತಿನಿಧಿಗಳು, ಕೇಂದ್ರ ಅಂತರ್ ಜಲ ಮಂಡಳಿ | ಸದಸ್ಯರು |
| 8 | ಜಂಟಿ ನಿರ್ದೇಶಕರು (ತಾಂತ್ರಿಕ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯ ಕಾರ್ಯದರ್ಶಿ |

3. ಟೆಂಡರ್ ಅಂಗೀಕಾರ ಪ್ರಾಧಿಕಾರ (Tender Accepting Authority)

| ಕ್ರ. ಸಂ | ಅಧಿಕಾರಿಯ ಪದನಾಮ | ಸ್ಥಾನಮಾನ |
|---|---|---|
| 1 | ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಅಧ್ಯಕ್ಷರು |
| 2 | ವಿಶೇಷ ಆಯುಕ್ತರು ಎಮ್.ಜಿ.ಎನ್.ಆರ್.ಇ.ಜಿ.ಎ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 3 | ಆಂತರಿಕ ಆರ್ಥಿಕ ಸಲಹೆಗಾರರು, ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 4 | ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 5 | ಜಂಟಿ ನಿರ್ದೇಶಕರು (ಆಡಳಿತ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 6 | ಜಂಟಿ ನಿರ್ದೇಶಕರು (ತಾಂತ್ರಿಕ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಸಿದ್ದೇಶ್ ಪೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಗೆ:**

1. ಮಹಾಲೇಖಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ
2. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು
3. ಸಂಬಂಧಿಸಿದ ಅಧಿಕಾರಿಗಳಿಗೆ

**ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಸಲ್ಲಿಸಿದೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.

2. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
3. ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ವಿಶೇಷ ಆಯುಕ್ತರು, ಎಮ್.ಜಿ.ಎನ್.ಆರ್.ಇ.ಜಿ.ಎ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
7. ಮುಖ್ಯ ಆರ್ಥಿಕ ಸಲಹೆಗಾರು/ಜಂಟಿ ನಿರ್ದೇಶಕರು, ತೋಟಗಾರಿಕೆ/ತಾಂತ್ರಿಕ/ಆಡಳಿತ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ವಿಶೇಷಾಧಿಕಾರಿ, ಗಣಕಕೋಶ, ಗ್ರಾಅಪ ಇಲಾಖೆ. ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
9. ಶ್ರೀ ರೋಹಿತ್ Programme Engineer ಅವರಿಗೆ www.end2endsolutions.comನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
10. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ